ದಿನಾಂಕಃ 24-02-2018 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆ ವಾದಿಪರ ಶ್ರೀ: ಬಿ.ಎಸ್.ವಾಯ್ ವಕೀಲರಿಂದಃ

ನಾನು ಈ ದಾವೆಯಲ್ಲಿ 1ನೇ ವಾದಿಯಾಗಿದ್ದು, 2ನೇ ವಾದಿಯಪರ ಸಹ ಸಾಕ್ಷ್ಯವನ್ನು ನುಡಿಯುತ್ತಿದ್ದು. ನಾನು ಮುಖ್ಯ ವಿಚಾರಣೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿನ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಶಾನೆಗೊಳಿಸಬೇಕೆಂದು ಕೇಳಿಕೊಳ್ಳುತ್ತೇನೆ.

1. ಸ್ವೀಕೃತಿ ನಿಪಿ-1 ಎಂದು,
2. ಆರ್.ಟಿ.ಸಿ. ನಿಪಿ-2 ಎಂದು,
3. ಕೈ ಬರಹದ ಪಹಣಿ ಪತ್ರಿಕೆ ನಿಪಿ-3 ಎಂದು,
4. ಎಂ.ಆರ್. ಪ್ರತಿಯ ದೃಢೀಕೃತ ನಕಲು ಪ್ರತಿ ನಿಪಿ-4 ಎಂದು,
5. ಎಂ.ಆರ್. ನಿಪಿ-5 ಎಂದು,
6. ಸಾಗುವಳಿ ಚೀಟಿಯ ದೃಢೀಕೃತ ನಕಲು ಪ್ರತಿ ನಿಪಿ-6 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಪಾಟೀ ಸವಾಲುಃ ಶ್ರೀ ವಕೀಲರಿಂದಃ ಕಾಲಾವಕಾಶ ಕೋರಿದ್ದರಿಂದ ಕೋರಿಕೆ ಮೇರೆಗೆ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸ.ಇದೆ.

ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.